ಸಿಸಿ ಸಂಖ್ಯೆಃ 25/2021
ಪಿಡಬ್ಲ್ಯೂಃ 01
ದಿನಾಂಕಃ 16.03.2023
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ದೂರುದಾರ ಪರ ಶ್ರೀಮತಿ ಡಿ ಬಿ ಸಿ ವಕೀಲರಿಂದ.

ನಾನು ಪ್ರಮಾಣಪತ್ರದ ಮೂಲಕ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದು, ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ದಿನಾಂಕಃ 23.09.2019 ರಂದು ಆರೋಪಿ ನೀಡಿದ ಚೆಕ್ ನಂ.870031 ರೂ.3,00,000/- ನೇದ್ದನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಎರಡು ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ನವರು ನೀಡಿರುವ ಎರಡು ಮೆಮೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು.

ಆರೋಪಿಗೆ ಕಳುಹಿಸಿದ ಕಾನೂನುಬದ್ಧ ನೋಟಿಸಿನ ಕಚೇರಿ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಅಂಚೆ ರಶೀದಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ನಾಟ್ ಕ್ಲೇಮ್ಡು ಅಂತಾ ಹಿಂದುರುಗಿದ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು. ಸದರಿ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ಒಡೆದು ನೋಡಲಾಗಿ ಅದರಲ್ಲಿರುವ ನೋಟಿಸನ್ನು ನಿಪಿ-6 ಎ ಎಂದು ಗುರುತಿಸಲಾಯಿತು.

ಆರೋಪಿಯ ವಿರುದ್ದ ಸೂಕ್ತ ಕ್ರಮ ಕೈಗೊಳ್ಳಲು ವಿನಂತಿ

ಪಾಟೀ ಸವಾಲುಃ ಆರೋಪಿ ಪರ ವಿ ಆರ್ ಎ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ.

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂಡಾಧಿಕಾರಿಗಳು. ಸವಣೂರು.